**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 51 ಜೈಅಯೋ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, **ದಿನಾಂಕ 17.09.2012**

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಗ್ರಾಮೀಣಾಭಿವೃಧ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಂದ:**

**ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,**

ಮಾನ್ಯರೇ,

ವಿಷಯ: 2012-13ನೇ ಸಾಲಿನಲ್ಲಿ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದಡಿ (ರಾಷ್ಟ್ರೀಯ ಜೈವಾನಿಲ ಅಭಿವೃಧ್ಧಿ ಕಾರ್ಯಕ್ರಮ) ಆಡಳಿತಾತ್ಮಕ ಮಂಜೂರಾತಿ ನೀಡುವ ಕುರಿತು

ಉಲ್ಲೇಖ:
1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 5-5/2009-ಬಿಇ ದಿನಾಂಕ 27.09.2009
2. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ 5-1/2012-ಬಿಇ ದಿನಾಂಕ 09.07.2012
3. ಸರ್ಕಾರದ ಪತ್ರ ಸಂಖ್ಯೆ: 35 ಜೈಅಯೋ 2010 ದಿನಾಂಕ 28.09.2010
4. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 150 ಜೈಅಯೋ 93 ದಿನಾಂಕ 29.09.1993

ಉಲ್ಲೇಖಿತ (1)ರ ಪತ್ರನ್ವಯ ಕೇಂದ್ರ ಸರ್ಕಾರದ ನವ ಮತ್ತು ನವೀಕರಿಸಬಹುದಾದ ಇಂಧನ ಮಂತ್ರಾಲಯವು ಉಲ್ಲೇಖಿತ(2) ರ ಪತ್ರದಲ್ಲಿ 2012-13ನೇ ಸಾಲಿಗೆ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದಡಿ (ರಾಷ್ಟ್ರೀಯ ಜೈವಾನಿಲ ಅಭಿವೃಧ್ಧಿ ಕಾರ್ಯಕ್ರಮ) ಮುಂದುವರಿಸಲಾಗಿದೆ ಎಂದು ತಿಳಿಸಲಾಗಿರುವ ನಿಟ್ಟಿನಲ್ಲಿ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮವನ್ನು 2012-13ನೇ ಸಾಲಿಗೆ ಮುಂದುವರಿಸಲಾಗಿದೆ.

ಉಲ್ಲೇಖಿತ(3) ರಲ್ಲಿ ನೀಡಲಾದ ಆಡಳಿತಾತ್ಮಕ ಮಂಜೂರಾತಿಯಲ್ಲಿನ ಅಂಶಗಳನ್ನೇ ಪ್ರಸಕ್ತ ಸಾಲಿಗೂ ಸಹ ಮುಂದುವರಿಸಿ ಆದೇಶಿಸಲಾಗಿದೆ ಹಾಗೂ ಇದರಲ್ಲಿನ ಈ ಕೆಳಕಂಡ ಅಂಶಗಳನ್ನು ಮಾತ್ರ ಪರಿಷ್ಕರಿಸಲಾಗಿದೆ.

**2. ಭೌತಿಕ ಗುರಿ**

ಕೇಂದ್ರ ಸರ್ಕಾರದ ಪತ್ರದಲ್ಲಿ 2012-13ನೇ ಸಾಲಿಗೆ ರಾಷ್ಟ್ರೀಯ ಜೈವಾನಿಲ ಮತ್ತು ಮ್ಯಾನುರ ಮ್ಯಾನೇಜ್‌ಮೆಂಟ್ ಕಾರ್ಯಕ್ರಮದಡಿ 12000 (600 ಸಂಖ್ಯೆಯ SC Comp.ಗುರಿಯನ್ನೊಳಗೊಂಡಂತೆ) ಜೈವಾನಿಲ ಸ್ಥಾವರಗಳ ಭೌತಿಕ ಗುರಿಯನ್ನು ರಾಜ್ಯಕ್ಕೆ ನಿಗದಿಪಡಿಸಲಾಗಿದ್ದು, ಈಗಾಗಲೇ 3 ತ್ರೈಮಾಸಿಕ ಭೌತಿಕ ಗುರಿಗಳನ್ನು ಜಿಲ್ಲಾ ಪಂಚಾಯಿತಿಗಳಿಗೆ ಹಂಚಿಕೆ ಮಾಡಲಾಗಿದೆ.

3. ಕಾರ್ಯಕ್ರಮದಡಿ ಮಾಸಿಕ ಪ್ರಗತಿ ವರದಿ ಹಾಗೂ ತ್ರೈಮಾಸಿಕ ಪ್ರಗತಿ ವರದಿಗಳನ್ನು ನಿಗದಿತ ಅವಧಿಯೊಳಗೆ ಅಂದರೆ ಪ್ರತಿ ಮಾಹೆ 5ನೇ ತಾರೀಖಿನೊಳಗೆ ಸಲ್ಲಿಸತಕ್ಕದ್ದು. (ನಮೂನೆಗಳನ್ನು ಇದರೊಂದಿಗೆ ಲಗತ್ತಿಸಿದೆ)

4. ಆಯಾ ಜಿಲ್ಲಾ ಪಂಚಾಯತ್‌ಗಳಿಗೆ ಹಂಚಿಕೆ ಮಾಡಲಾದ ಭೌತಿಕ ಗುರಿಯನ್ವಯ ಪೂರ್ಣ ಪ್ರಮಾಣದಲ್ಲಿ ತಪ್ಪದೇ ಪ್ರಗತಿ ಸಾಧಿಸುವುದು.

5. ಉಲ್ಲೇಖಿತ (4)ರ ಆದೇಶದಲ್ಲಿನ ಮಾರ್ಗಸೂಚಿಯಲ್ಲಿನ ಮಾನದಂಡಗಳನ್ವಯ ಟರ್ನ ಕೀ ಏಜನ್ಸಿಯನ್ನು ನೇಮಕಾತಿ ಮಾಡುವುದು.

6. ಆಯಾ ಜಿಲ್ಲೆಯಲ್ಲಿನ ಜೈವಾನಿಲ ಸ್ಥಾವರದ ನಿರ್ಮಾಣದ ಸಾಮರ್ಥ್ಯದನುಸಾರ ಆರ್ಥಿಕ ಸಾಲುಗಳಲ್ಲಿ ಅನುದಾನವನ್ನು ಹಂಚಿಕೆ ಮಾಡಿಕೊಳ್ಳಲು ಕ್ರಮವಹಿಸುವುದು.

7. 2012-13ನೇ ಸಾಲಿನಲ್ಲಿ ಸದರಿ ಕಾರ್ಯಕ್ರಮವು ಜಿಲ್ಲಾ ಪಂಚಾಯತ್ ಕಾರ್ಯಕ್ರಮವಾಗಿರುತ್ತದೆ.

8. ಹಣಬಳಕೆ ಪ್ರಮಾಣ ಪತ್ರ ಹಾಗೂ ಕ್ಲೇಮುಗಳನ್ನು ದೃಢೀಕರಣದೊಂದಿಗೆ ನಿಗದಿತ ನಮೂನೆಯಲ್ಲಿ ಸಲ್ಲಿಸುವುದು.

9. ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಆದೇಶ, ಸುತ್ತೋಲೆಗಳನ್ವಯ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಕ್ರಮ ಕೈಗೊಳ್ಳುವುದು.

ತಮ್ಮ ವಿಶ್ವಾಸಿ,

(ಎಂ.ದೀಪಾ)
ನಿರ್ದೇಶಕರು(ಗ್ರಾಮೂಸೌ) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಎಲ್ಲಾ ಜಿಲ್ಲಾ ಪಂಚಾಯತ್‌ನ ಉಪಕಾರ್ಯದರ್ಶಿ(ಅಭಿವೃದ್ಧಿ) ಮತ್ತು ಮುಖ್ಯ ಲೆಕ್ಕಾಧಿಕಾರಿಗಳು
3. ನಿರ್ದೇಶಕರು, ಕೃಷಿ ನಿರ್ದೇಶನಾಲಯ, ಶೇಷಾದ್ರಿರಸ್ತೆ, ಬೆಂಗಳೂರು
4. ಎಲ್ಲಾ ಜಿಲ್ಲೆಯ ಜಂಟಿ ಕೃಷಿ ಅಧಿಕಾರಿಗಳಿಗೆ
5. ಉಪಜನರಲ್ ಮ್ಯಾನೇಜರ್, ನಬಾರ್ಡ್, ಜೀವನ ಪ್ರಕಾಶ್ ಅನೆಕ್ಸ 113:1, ಜೆ.ಸಿ.ರಸ್ತೆ, ಬೆಂಗಳೂರು 560-024.
6. ಸಮನ್ವಯ ಅಧಿಕಾರಿ, ಪ್ರಾದೇಶಿಕ ಜೈವಾನಿಲ ಅಭಿವೃದ್ಧಿ ತರಬೇತಿ ಕೇಂದ್ರ ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು- 560 024
7. ವಿಶೇಷಾಧಿಕಾರಿಗಳು,( ಜಿಲ್ಲಾ ಪಂಚಾಯತ್) ಆರ್ಥಿಕ ಇಲಾಖೆ , ವಿಧಾನ ಸೌಧ, ಬೆಂಗಳೂರು
8. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
9. ನಿರ್ದೇಶಕರು, ಪಿಎಂಐ, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
10. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ
11. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ. ಮತ್ತು ಪಂ.ರಾಜ್ ಇಲಾಖೆ
12. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು